ತಂತಿ ವಿಳಾಸ: ಯೂನಿವರ್ಸಿಟಿ
ದೂರವಾಣಿ ಸಂಖ್ಯೆ: 2419677/2419361

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ದಿನಾಂಕ:03.06.2025

ಸಂಖ್ಯೆ:ಜಿಎಲ್13/92/2023-24

## ಸುತ್ತೋಲೆ

ವಿಷಯ: ರಾಷ್ಟ್ರಲಾಂಛನವನ್ನು 'ಸತ್ಯಮೇವ ಜಯತೆ' ಧ್ಯೇಯವಾಕ್ಯದೊಂದಿಗೆ ಸಂಪೂರ್ಣವಾಗಿ ಪ್ರದರ್ಶಿಸುವ ಕುರಿತು.
ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ರಾಜಕೀಯ) ಬೆಂಗಳೂರು ಇವರ ಪತ್ರ ಸಂಖ್ಯೆ:ಸಿಆಸುಇ 54 ರಾಸ 2025, ದಿನಾಂಕ:03.03.2025.

****

ಭಾರತ ಸರ್ಕಾರದ ಅಧಿಕೃತ ಲಾಂಛನ 'ಸತ್ಯಮೇವ ಜಯತೆ' ಧ್ಯೇಯವಾಕ್ಯವನ್ನು ಹೊಂದಿದ್ದು ರಾಷ್ಟ್ರ ಲಾಂಛನದ ಪೂರ್ಣ ಚಿತ್ರವನ್ನು ಬಳಸುವ ಬಗ್ಗೆ ಉಲ್ಲೇಖಿತ ಸುತ್ತೋಲೆಯಲ್ಲಿ ಕ್ರಮ ವಹಿಸುವಂತೆ ಸೂಚಿಸಿ ಕೆಳಕಂಡಂತೆ ಸ್ಪಷ್ಟೀಕರಿಸಲಾಗಿದೆ.

ಭಾರತದ ಸರ್ಕಾರದ ಅಧಿಕೃತ ಲಾಂಛನವು ಜನತೆಯ ಅಪಾರ ಗೌರವ ಮತ್ತು ವಿಶ್ವಾಸವನ್ನು ಹೊಂದಿದ್ದು 'ಸತ್ಯಮೇವ ಜಯತೆ' ಧ್ಯೇಯವಾಕ್ಯವನ್ನು ಹೊಂದಿರುವ ರಾಷ್ಟ್ರ ಲಾಂಛನದ ಪೂರ್ಣ ಚಿತ್ರವನ್ನು ಬಳಸುವುದು ಅತ್ಯಂತ ಮುಖ್ಯವಾಗಿರುತ್ತದೆ.

ರಾಷ್ಟ್ರ ಲಾಂಛನವನ್ನು ಹಲವು ಕಡೆಗಳಲ್ಲಿ ಅನಧಿಕೃತ ವ್ಯಕ್ತಿಗಳು/ಸಂಸ್ಥೆಗಳು ರಾಷ್ಟ್ರಲಾಂಛನವನ್ನು ಮುದ್ರಣ ಸಾಮಾಗ್ರಿ ಹಾಗೂ ವಾಹನಗಳ ಮೇಲೆ ಬಳಸುತ್ತಿರುವುದು ಕಂಡು ಬಂದಿರುತ್ತದೆ. ಭಾರತದ ರಾಷ್ಟ್ರಲಾಂಛನ (ಅನುಚಿತ ಬಳಕೆ ನಿಷೇಧ) ಅಧಿನಿಯಮ -2005 ಮತ್ತು ಭಾರದ ರಾಷ್ಟ್ರಲಾಂಛನ (ಬಳಕೆಯ ನಿಯಂತ್ರಣ) ನಿಯಮಗಳು 2007ರಲ್ಲಿ ತಿಳಿಸಿರುವ ಅಧಿಕಾರಿಗಳಿಗೆ/ಉದ್ದೇಶಗಳಿಗೆ ಮಾತ್ರ ರಾಷ್ಟ್ರಲಾಂಛನದ ಬಳಕೆಯು ಸೀಮಿತವಾಗಿರುತ್ತದೆ ಎಂದು ಈ ಮೂಲಕ ಸ್ಪಷ್ಟಪಡಿಸಿದೆ.

ಈ ಹಿನ್ನಲೆಯಲ್ಲಿ ಮೈಸೂರು ವಿಶ್ವವಿದ್ಯಾನಿಯದ ವ್ಯಾಪ್ತಿಯಲ್ಲಿ ಬರುವ ಸಂಸ್ಥೆ/ಕಛೇರಿಗಳಿಗೆ ಕೇಂದ್ರ ಸರ್ಕಾರದ ಪತ್ರದಲ್ಲಿ ತಿಳಿಸಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು. ಮೇಲ್ಕಂಡ ಅಧಿನಿಯಮ ಹಾಗೂ ನಿಯಮಗಳ ಉಲ್ಲಂಘನೆಯಾಗದಂತೆ ಅಗತ್ಯ ಕ್ರಮ ವಹಿಸುವುದು.

'ಸತ್ಯಮೇವ ಜಯತೆ' ಧ್ಯೇಯವಾಕ್ಯವನ್ನು ಹೊಂದಿರುವ ಭಾರತದ ರಾಷ್ಟ್ರ ಲಾಂಛನದ ಪೂರ್ಣ ಚಿತ್ರವನ್ನು ಬಳಸುವ ಬಗ್ಗೆ ಮೈಸೂರು ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗಗಳ ಬಟವಾಡೆ ಅಧಿಕಾರಿಗಳು, ಘಟಕ ಕಾಲೇಜುಗಳ ಪ್ರಾಂಶುಪಾಲಕು, ಅಧ್ಯಾಪಕ/ಅಧ್ಯಾಪಕೇತರ ಉದ್ಯೋಗಿಗಳು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳು ಭಾರತದ ರಾಷ್ಟ್ರದ ಲಾಂಛನದ ಅಧಿನಿಯಮ ಹಾಗೂ-ನಿಯಮಗಳ ಉಲ್ಲಂಘನೆಯಾಗದಂತೆ ಅಗತ್ಯ-ಕ್ರಮ ವಹಿಸುವಂತೆ ಈ ಮೂಲಕ ಸೂಚಿಸಲಾಗಿದೆ.-

ಈ ಸಂಬಂಧ ಕೇಂದ್ರ ಸರ್ಕಾರ ಹೊರಡಿಸಿರುವ ದಾಖಲೆಗಳನ್ನು ಮೈ.ವಿ.ವಿ. ನಿಲಯದ ಜಾಲತಾಣದಲ್ಲಿ ಪ್ರಕಟಿಸಲಾಗಿದೆ.

ಕುಲಸಚಿವರಿಂದ ಕರಡು ಅನುಮೋದಿಸಿದೆ

Umamaheshwari 4/6/25
ಉಪ ಕುಲಸಚಿವರು(ಸಾಮಾನ್ಯ)
ಉಪ ಕುಲಸಚಿವ (ಸಾಮಾನ್ಯ)
ಆಡಳಿತ
ಮೈ.ವಿ.ವಿ. ಮೈಸೂರು

ಗೆ,

1. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು, ಮೈವಿ.ವಿ.ನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.

(1–6) ಅವಶ್ಯ ಕ್ರಮ ಕೈಗೊಳ್ಳುವುದು.

7. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ರಾಜಕೀಯ), ಬಹುಮಹಡಿ ಕಟ್ಟಡ ಬೆಂಗಳೂರು-ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
8. ಉಪ ಕುಲಸಚಿವರು(ಸಾಮಾನ್ಯ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಇವರಿಗೆ ಸರ್ಕಾರದ ದಾಖಲೆಗಳು ಹಾಗೂ ವಿಶ್ವವಿದ್ಯಾನಿಲಯದ ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.
10. ಮಾನ್ಯ ಕುಲಪತಿಯವರ/ಕುಲಸಚಿವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಕಛೇರಿ ಪ್ರತಿ.